ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗಡಿನಾಡು ಪ್ರದೇಶಗಳಲ್ಲಿರುವ ಕರ್ನಾಟಕ ಸಂಘಗಳನ್ನು ಪ್ರೋತ್ಸಾಹಿಸುವ ಬಗ್ಗೆ

ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭೆಯಿಂದ ಚುನಾಯಿತರಾದವರು):-

842 (1095) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಗಡಿನಾಡು ರಾಯಚೂರು ನಗರದಲ್ಲಿ ಪ್ರಾರಂಭಗೊಂಡ `ಕರ್ನಾಟಕ ಸಂಘ' ದ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಗಡಿನಾಡು ಭಾಗದಲ್ಲಿರುವ ಕರ್ನಾಟಕ ಸಂಘಗಳನ್ನು ಪ್ರೋತ್ಸಾಹಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು;

(ಇ) ರಾಯಚೂರು ನಗರದಲ್ಲಿ ಗಾಂಧಿಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಸದರಿ ಭವನ ನಿರ್ಮಾಣಕ್ಕೆ ಯಾವ ವರ್ಷದಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ; ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ?